ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಮಾಜಿ ಸೈನಿಕರಿಗೆ ಭೂ ಮಂಜೂರಾತಿಯನ್ನು ಮಾಡದೆ ತಾರತಮ್ಯ ಮಾಡಿರುವ ಬಗ್ಗೆ

ಶ್ರೀ ಎಂ. ಪಿ. ಸುನೀಲ್ ಸುಬ್ರಮಣಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

1102 (1264) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ಹತ್ತು ವರ್ಷಗಳಿಂದ ಎಷ್ಟು ಮಾಜಿ ಸೈನಿಕರಿಗೆ ಮಾಜಿ ಸೈನಿಕ ಕೋಟಾದಡಿಯಲ್ಲಿ ಭೂಮಿಯ ಮಂಜೂರಾತಿಯನ್ನು ನೀಡಲಾಗಿದೆ; (ಹೆಸರಿನೊಂದಿಗೆ ಪೂರ್ಣ ವಿವರಗಳನ್ನು ನೀಡುವುದು)

(ಆ) ಸರ್ಕಾರಿ ಜಾಗವನ್ನು ಮಾಜಿಸೈನಿಕರ ಕೋಟಾದಡಿಯಲ್ಲಿ ಭೂ ಮಂಜೂರಾತಿಗಾಗಿ ಮನವಿ ಮಾಡಿ ಕಳೆದ ಹತ್ತು ವರ್ಷಗಳಿಂದ ಇಲ್ಲಿಯವರೆಗೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಇದರಲ್ಲಿ ವಿಲೇವಾರಿಯಾದ ಅರ್ಜಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ಭೂಮಿ ಇಲ್ಲದ ಮಾಜಿ ಸೈನಿಕರಿಗೆ ಕೃಷಿ ಭೂಮಿಯನ್ನು ಹಂಚಿಕೆ ಮಾಡಲು ಸರ್ಕಾರದ ಕ್ರಮಗಳೇನು? (ವಿವರ ನೀಡುವುದು)